ಕಾರಣವೇನು?

ಆ) ಈ ಸಂಚಾರಿ ವೈದ್ಯಕೀಯ ಘಟಕದ ಅವಶ್ಯಕತೆಯಿದ್ದು ಪುನಃ ಎಂದು ಆರಂಭಿಸಲಾಗುವುದು?

ಉತ್ತರ

ಅ) ಸಂಚಾರಿ ವೈದ್ಯಕೀಯ ಘಟಕ ಮಂಜೂರಾತಿ ಆಗಿರುವುದಿಲ್ಲ ಆದುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ

ಆ) ಉದ್ಭವಿಸುವುದಿಲ್ಲ

ಔರಾದ್ ಪಟ್ಟಣದಲ್ಲಿರುವ ಆಸ್ಪತ್ರೆಯ ಉನ್ನತೀಕರಣ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 217(675)

ಸದಸ್ಯರ ಹೆಸರು: ಶ್ರೀ ಗುಂಡಪ್ಪ ವಕೀಲ್(ಔರಾದ್)

ಉತ್ತರಿಸುವ ಸಚಿವರು: ಡಾ॥ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಪ್ರಶ್ನೆ

ಅ. ಬೀದರ್ ಜಿಲ್ಲೆ ಔರಾದ್ ಪಟ್ಟಣದಲ್ಲಿರುವ ಸರ್ಕಾರಿ ಆಸ್ಪತ್ರೆಯನ್ನು 30 ಹಾಸಿಗೆಗಳುಳ್ಳ ಆಸ್ಪತ್ರೆಯನ್ನಾಗಿ ಪರಿವರ್ತಿಸುವ ಯೋಜನೆ ಸಿದ್ದವಾಗಿದೆಯೇ?

ಆ. ಇದರ ನಿರ್ಮಾಣ ಕಾಮಗಾರಿಯನ್ನು ಯಾರಿಗೆ ವಹಿಸಲಾಗಿದೆ ಎಷ್ಟು ಲಕ್ಷ ರೂ.ಗಳಿಗೆ ಕಾಮಗಾರಿ ಮಂಜೂರಾಗಿದೆ? ಸಾಲ ಎಷ್ಟು ಹಣ ಮಂಜೂರಾಗಿದೆ ಖರ್ಚು ಮಾಡಲಾದ ಹಣವೆಷ್ಟು?

ಇ. ಈಗ ಕಾಮಗಾರಿ ಯಾವ ಹಂತದಲ್ಲಿದೆ?

ಈ. ಈ ಕಾಮಗಾರಿಯನ್ನು ಎಂದು ಪೂರ್ಣಗೊಳಿಸಲಾಗುತ್ತದೆ ಮತ್ತು ಈ ಕಾಮಗಾರಿಯನ್ನು ಪೂರ್ಣಗೊಳಿಸಲು ಬೇಕಾಗಿರುವ ಮೊತ್ತ ಎಷ್ಟು ಹಾಗೂ ಕೆಲಸ ಮುಗಿಸಲು ಕಾಲಮಿತಿಯನ್ನು ಹಾಕಿಕೊಳ್ಳಲಾಗಿದೆಯೇ?

ಉತ್ತರ

ಅ. ಬೀದರ್ ಜಿಲ್ಲೆಯ ಔರಾದ್ ಪಟ್ಟಣದಲ್ಲಿರುವ ಸರ್ಕಾರಿ ಆಸ್ಪತ್ರೆಗನ್ನು 30 ಹಾಸಿಗೆಗಳಿಂದ 50 ಹಾಸಿಗೆಗಳ ಆಸ್ಪತ್ರೆಯಾಗಿ ವಿಸ್ತರಿಸುವ ಕಾಮಗಾರಿಯನ್ನು ಕೆಎಫ್‌ಡಬ್ಲ್ಯೂ ನೆರವಿನ ಯೋಜನೆಯಡಿ ಸೇರಿಸಲಾಗಿದೆ.

ಆ. ರಾಷ್ಟ್ರೀಯ ಸ್ಪರ್ಧಾತ್ಮಕ ಗುತ್ತಿಗೆಯ ಆಧಾರದ ಮೇಲೆ ಈ ಕಾಮಗಾರಿಯನ್ನು ಶ್ರೀ ಡಿ.ಜೆ.ಪ್ರಕಾಶ್ ರಾವ್, ವಿಜಯವಾಡ ಇವರಿಗೆ ರೂ.126.88 ಲಕ್ಷಗಳ ಗುತ್ತಿಗೆ ಮೊತ್ತಕ್ಕೆ ವಹಿಸಲಾಗಿದೆ. ಈ ಕಾಮಗಾರಿಗೆ ರೂ.117.00 ಲಕ್ಷಗಳ ಅಂದಾಜು ಮಂಜೂರಾಗಿದ್ದು ಇದುವರೆವಿಗೂ ರೂ.114.71 ಲಕ್ಷಗಳು ವೆಚ್ಚವಾಗಿದೆ.

ಇ. ಆಸ್ಪತ್ರೆ, ವಸತಿಗೃಹಗಳು ಮತ್ತು ಇತರೆ ಕಾಮಗಾರಿಗಳು ಮುಗಿಯುವ ಹಂತದಲ್ಲಿದೆ.

ಈ ಗುತ್ತಿಗೆ ಕರಾರಿನಂತೆ ಕಾಮಗಾರಿಯನ್ನು ದಿನಾಂಕ: 17.9.2001ಕ್ಕೆ ಪೂರ್ಣಗೊಳಿಸಬೇಕಾಗಿದ್ದು ಫೆಬ್ರವರಿ 2002ರ ಅಂತ್ಯಕ್ಕೆ ಎಲ್ಲಾ ರೀತಿಯಲ್ಲೂ ಪೂರ್ಣಗೊಳಿಸಲಾಗುವುದು. ಈ ಕಾಮಗಾರಿ ಪೂರ್ಣಗೊಳಿಸಲು ಹೆಚ್ಚುವರಿ ಕೆಲಸಗಳೂ ಸೇರಿ ಒಟ್ಟಾರೆ ರೂ.140.00 ಲಕ್ಷಗಳ ವೆಚ್ಚವಾಗುವ ನಿರೀಕ್ಷೆಯಿದೆ.

ಔರಾದ್‌ನಲ್ಲಿ ಮುಕ್ತ ವಿಶ್ವವಿದ್ಯಾನಿಲಯ ಪ್ರಾರಂಭಿಸುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 218(679)

ಸದಸ್ಯರ ಹೆಸರು: ಶ್ರೀ ಗುಂಡಪ್ಪ ವಕೀಲ್(ಔರಾದ್)

ಉತ್ತರಿಸುವ ಸಚಿವರು: ಡಾ॥ಜಿ.ಪರಮೇಶ್ವರ್(ಉನ್ನತ ಶಿಕ್ಷಣ ಸಚಿವರು)

ಪ್ರಶ್ನೆ

ಅ) ಬೀದರ್ ಜಿಲ್ಲೆಯ, ಔರಾದ್ ಪಟ್ಟಣದಲ್ಲಿ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವನ್ನು ಪ್ರಾರಂಭಿಸಲು ಸರ್ಕಾರ ನಿರ್ಧರಿಸಿದೆಯೇ?

ಆ) ಈ ಬೇಡಿಕೆಯು ಈ ಭಾಗದಲ್ಲಿ ಎಷ್ಟು ವರ್ಷದಿಂದ ಇದೆ?

ಇ) ಮುಕ್ತ ವಿಶ್ವವಿದ್ಯಾನಿಲಯ ಸ್ಥಾಪನೆಗೆ ಕೈಗೊಂಡಿರುವ ಕ್ರಮಗಳೇನು? ಈ